# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂದನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

**ಶುಕ್ರವಾರ, ದಿನಾಂಕ: 25ನೇ ಸೆಪ್ಟೆಂಬರ್, 2020**
**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

## 01.ಸಂತಾಪ ಸೂಚನೆ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

1) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಮತ್ತು ನಾಲ್ಕನೇ ಪಟ್ಟಿಯ ರೀತ್ಯಾ.

2) **ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಉಪ ಮುಖ್ಯಮಂತ್ರಿಗಳು) ಅವರು;-**

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ಸಭೆಯ ಮುಂದಿಡುವುದು.

3) ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.

01. ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕ, 2020

02. ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ,2020

03. ಕರ್ನಾಟಕ ನಗರ ಪಾಲಿಕೆಗಳ (ಮೂರನೇ ತಿದ್ದುಪಡಿ) ವಿಧೇಯಕ,2020

04. ಕರ್ನಾಟಕ ಸಾಂಕ್ರಾಮಿಕ ರೋಗಗಳ ವಿಧೇಯಕ, 2020

## ೦೩. ವರದಿಗಳನ್ನೊಪ್ಪಿಸುವುದು

**01. ಡಾ: ವೈ.ಎ. ನಾರಾಯಣಸ್ವಾಮಿ** (ಸದಸ್ಯರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ) ಅವರು 2019-20ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ನಾಲ್ಕನೆಯ ವರದಿಯನ್ನೊಪ್ಪಿಸುವುದು.

**02. ಶ್ರೀ ರಘುನಾಥರಾವ್ ಮಲ್ಕಾಪುರೆ,** (ಸದಸ್ಯರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) ಅವರು ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೆಯ ವರದಿಯನ್ನೊಪ್ಪಿಸುವುದು.

## ೦4. ನಿರ್ಣಯ

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಎಸ್.ಆರ್.ಪಾಟೀಲ್ ಹಾಗೂ ಸದಸ್ಯರುಗಳಾದ ಶ್ರೀ ಕೆ.ಗೋವಿಂದರಾಜು, ಶ್ರೀ ಪಿ.ಆರ್.ರಮೇಶ್, ಶ್ರೀ ಬಿ.ಕೆ.ಹರಿಪ್ರಸಾದ್, ಶ್ರೀ ಮರಿತಿಬ್ಬೇಗೌಡ ಹಾಗೂ ಇತರರುಗಳು ಈ ಕೆಳಕಂಡ ನಿರ್ಣಯವನ್ನು ಮಂಡಿಸುವುದು.

> "ದಿ ಮೈಸೂರು ಲ್ಯಾಂಪ್ಸ್ ವರ್ಕ್ಸ್ ಲಿಮಿಟೆಡ್ ಸಂಸ್ಥೆ ಹಾಗೂ ಸಂಸ್ಥೆಗೆ ಸೇರಿದ ಸ್ವತ್ತುಗಳನ್ನು ಯಾವುದೇ ಕಂಪನಿ ಕಾಯ್ದೆಯಲ್ಲಿ ಬರುವ ಸರ್ಕಾರಿ ಸ್ವಾಮ್ಯದ ಉದ್ದಿಮೆ/ಸಂಸ್ಥೆಗಳು ಸೇರಿದಂತೆ ಯಾವುದೇ ವ್ಯಕ್ತಿಗಳಿಗೆ ಪರಭಾರೆ ಮಾಡದಂತೆ ನೇರವಾಗಿ ಸರ್ಕಾರವೇ ತನ್ನ ಅಧೀನಕ್ಕೆ ಪಡೆದು ಆಸ್ಪತ್ರೆ, ಮಕ್ಕಳ ಪಾರ್ಕ್, ಉದ್ಯಾನವನ ಸೇರಿದಂತೆ ಸಾರ್ವಜನಿಕ ಉದ್ದೇಶಕ್ಕೆ ಮಾತ್ರ ಬಳಸತಕ್ಕದ್ದು" ಎಂದು ಈ ಸದನವು ನಿರ್ಣಯಿಸುತ್ತದೆ.

## ೦5. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**01. ಕರ್ನಾಟಕ ನಗರ ಪಾಲಿಕೆಗಳ (ಮೂರನೇ ತಿದ್ದುಪಡಿ) ವಿಧೇಯಕ,2020**

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ನಗರ ಪಾಲಿಕೆಗಳ (ಮೂರನೇ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**02. ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕ, 2020**

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಬೃಹತ್ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**03. ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ,2020**

ಶ್ರೀ ಕೆ.ಸಿ. ನಾರಾಯಣಗೌಡ (ಮಾನ್ಯ ಪೌರಾಡಳಿತ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**04. ಕರ್ನಾಟಕ ಸಾಂಕ್ರಾಮಿಕ ರೋಗಗಳ ವಿಧೇಯಕ, 2020**

ಶ್ರೀ ಬಿ. ಶ್ರೀರಾಮುಲು (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗ ಅಭಿವೃದ್ಧಿ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಸಾಂಕ್ರಾಮಿಕ ರೋಗಗಳ ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ೦6. ಸದಸ್ಯರುಗಳ ಖಾಸಗಿ ಕಾರ್ಯಕಲಾಪಗಳು

### ಅ) ಖಾಸಗಿ ವಿಧೇಯಕ

**"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ" 2017:-**

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಹಾಗೂ ಶ್ರೀ ಜಿ. ರಘು ಆಚಾರ್ ಅವರುಗಳು:-

ಅ) 2017ನೇ ಸಾಲಿನ "ಕರ್ನಾಟಕ ಶಿಕ್ಷಣ (ತಿದ್ದುಪಡಿ)ವಿಧೇಯಕ"ವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

### ಆ) ಖಾಸಗಿ ನಿರ್ಣಯ

**ಶ್ರೀ ಯು.ಬಿ.ವೆಂಕಟೇಶ್ ಅವರು ಈ ಕೆಳಕಂಡ ಖಾಸಗಿ ನಿರ್ಣಯವನ್ನು ಮಂಡಿಸುವುದು:-**

"ದೇಸೀಯಾ ಪರಂಪರೆಯ ಆಯುರ್ವೇದ ವೈದ್ಯ ಪದ್ದತಿಗೆ ಮನ್ನಣೆ ದೊರಕಿಸಿ ಕೊಡುವ ಸಲುವಾಗಿ ನೀತಿಯೊಂದನ್ನು ರೂಪಿಸುವ ಕುರಿತು"

## 07. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀಯುತರುಗಳಾದ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಮರಿತಿಬ್ಬೇಗೌಡ, ಕೆ.ಟಿ. ಶ್ರೀಕಂಠೇಗೌಡ, ಡಾ:ವೈ.ಎ. ನಾರಾಯಣಸ್ವಾಮಿ, ಆಯನೂರು ಮಂಜುನಾಥ, ಅರುಣ ಶಹಾಪುರ, ಎಸ್.ಎಲ್. ಭೋಜೇಗೌಡ, ನಿರಾಣಿ ಹಣಮಂತ ರುದ್ರಪ್ಪ ಹಾಗೂ ಡಾ:ಚಂದ್ರಶೇಖರ ಬ ಪಾಟೀಲ್** ಅವರುಗಳು ಜೆ.ಓ.ಸಿ (ಶಿಕ್ಷಕರ) ವಿಧೇಯಕ ತಿದ್ದುಪಡಿಯಾದ ನಂತರ ವಂಚಿತರಾದ 530 ಬೋಧಕ ಹಾಗೂ ಬೋಧಕೇತರರಿಗೆ ನ್ಯಾಯ ಒದಗಿಸುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಒತ್ತುವರಿಯಾಗಿರುವ ಕೆರೆಗಳನ್ನು ತೆರವುಗೊಳಿಸಿ ಪುನಶ್ಚೇತನಗೊಳಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

ಇ) **ಶ್ರೀ ಪಿ.ಆರ್ ರಮೇಶ್** ಅವರು ರಾಜ್ಯಾದ್ಯಾಂತ ಕೋವಿಡ್-19 ತೀವ್ರವಾಗಿ ಹರಡಿರುವ ಹಿನ್ನಲೆಯಲ್ಲಿ ರಾಜ್ಯದಲ್ಲಿನ ಜನಸಾಮಾನ್ಯರಿಗೆ ಚಿಕಿತ್ಸೆ ಕೊಡಿಸಲು ಆರೋಗ್ಯ ಸಂಸ್ಥೆಗಳು ಮಾಡಿಕೊಂಡಿರುವ ಸಿದ್ದತೆ ಹಾಗೂ ಸಾರ್ವಜನಿಕರ ಮನೋಸ್ಥೈರ್ಯ ಹೆಚ್ಚಿಸುವ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಈ) **ಶ್ರೀ ಅ.ದೇವೇಗೌಡ** ಅವರು ಬೆಂಗಳೂರು ಮಹಾನಗರ ಪಾಲಿಕೆಯು ಪ್ರಾರಂಭಿಸಿರುವ ನಾಲ್ಕು ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಅರ್ಹತೆ/ಕೆಲಸಕ್ಕೆ ಸಮಾನ ವೇತನವನ್ನು ಕಲ್ಪಿಸಿಕೊಡುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

ಉ) **ಶ್ರೀ ಕೆ.ಹರೀಶ್ ಕುಮಾರ್** ಅವರು ಉಡುಪಿ ಜಿಲ್ಲಾ ಮೂರ್ತೆದಾರರ ಸಹಕಾರಿ ಮಹಾಮಂಡಲದ ಮಾಜಿ ಕಾರ್ಯನಿರ್ವಹಣಾಧಿಕಾರಿಯವರು ಹಣ ದುರುಪಯೋಗ ಮಾಡಿರುವ ಬಗ್ಗೆ ಹಾಗೂ ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು, ಮೈಸೂರು ಪ್ರಾಂತ್ಯ ಇವರ ನ್ಯಾಯಾಲಯದಲ್ಲಿ ವಿಚಾರಣೆಗೆ ಬಾಕಿಯಿದ್ದ ಪ್ರಕರಣದ ಕಡತ ನಾಪತ್ತೆ ಮಾಡಿ ತನಿಖೆಗೆ ವಿಳಂಬ ಮಾಡುವ ಮೂಲಕ ಅವ್ಯವಹಾರದಲ್ಲಿ ಭಾಗಿಯಾಗಿದ್ದ ಅಧಿಕಾರಿಗಳಿಗೆ ರಕ್ಷಣೆ ನೀಡಿರುವುದರಿಂದ ಸಹಕಾರಿ ಮಹಾಮಂಡಲಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

ಊ) **ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ** ಅವರು ರಾಜ್ಯಾದ್ಯಂತ ಜನ ಸಾಮಾನ್ಯರು ದಿನನಿತ್ಯ ಬಳಸುವ ಆಹಾರ ಪದಾರ್ಥಗಳಲ್ಲಿ ರಾಸಾಯನಿಕ ಪದಾರ್ಥಗಳ ಕಲಬೆರಕೆಯಿಂದಾಗಿ ತೊಂದರೆ ಎದುರಿಸುತ್ತಿರುವುದರಿಂದ ಜನಸಾಮಾನ್ಯರ ಆರೋಗ್ಯದ ರಕ್ಷಣೆಗಾಗಿ ಆಹಾರ ಕಲಬೆರಕೆ ಮಾಡುವುದನ್ನು ನಿಯಂತ್ರಿಸಲು, ಕಲಬೆರಕೆ ಮಾಡುವವರ ವಿರುದ್ಧ ಕಠಿಣ ಕ್ರಮವಹಿಸುವ ಬಗ್ಗೆ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

..5..

## 08. ನಿಯಮ 330ರ ಮೇರೆಗೆ

ಅ) **ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಸ್ನಾತಕೋತ್ತರ ಪದವಿಗೆ ಎಂ.ಸಿ.ಐನವರು ಅನುಮತಿ ನೀಡಿದ್ದು, ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಬೋಧಕ ಸಿಬ್ಬಂದಿಗಳ ಕೊರತೆ ಇರುತ್ತದೆ. ಸರ್ಕಾರ ಪ್ರಸ್ತುತ ಬೋಧಕ ಹುದ್ದೆಗಳನ್ನು ಸೃಜಿಸಲು ಸಾಧ್ಯವಿಲ್ಲವೆಂದು ಕೋರ್ಸುಗಳನ್ನು ಪ್ರಾರಂಭಿಸುವುದನ್ನು ಕೈಬಿಡಲು ತಿಳಿಸಿರುವುದರಿಂದ ಉಂಟಾಗಿರುವ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

ಆ) **ಶ್ರೀಯುತರುಗಳಾದ ಬಿ.ಕೆ ಹರಿಪ್ರಸಾದ್ ಹಾಗೂ ಯು.ಬಿ ವೆಂಕಟೇಶ್** ಅವರುಗಳು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯು **"**ನೆರೆ ಹೊರೆಯಲ್ಲಿ ಸಮಾನ ಶಿಕ್ಷಣ ನೀತಿ**"** ಎಂಬ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿರುವ ಬಗ್ಗೆ ಪ್ರಸ್ತಾಪಿಸುವುದು.

ಇ) **ಶ್ರೀಮತಿ ಎಸ್.ವೀಣಾ ಅಚ್ಚಯ್ಯ** ಅವರು ತಲಕಾವೇರಿಯಲ್ಲಿ ಬೆಟ್ಟಗಳು ಕುಸಿಯದಂತೆ ಪರಿಣಿತರ ನೇತೃತ್ವದಲ್ಲಿ ಕಾರ್ಯಯೋಜನೆಯನ್ನು ಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸುವುದು.

ಈ) **ಶ್ರೀ ಎಸ್.ಆರ್.ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಎಂ.ನಾರಾಯಣಸ್ವಾಮಿ, ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಸದಸ್ಯರುಗಳಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಶ್ರೀ ಬಿ.ಕೆ.ಹರಿಪ್ರಸಾದ್, ಶ್ರೀ ಯು.ಬಿ.ವೆಂಕಟೇಶ್, ಶ್ರೀ ಆರ್.ಬಿ.ತಿಮ್ಮಾಪುರ, ಶ್ರೀ ಪ್ರಕಾಶ್ ಕೆ. ರಾಥೋಡ್ ಮತ್ತು ಶ್ರೀ ಎಂ.ಎ.ಗೋಪಾಲಸ್ವಾಮಿ** ಅವರುಗಳು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ, ಬೆಂಗಳೂರು ಪೂರ್ವ ತಾಲ್ಲೂಕಿನ ಬಿದರಹಳ್ಳಿ ಹೋಬಳಿಯಲ್ಲಿ ನಿರ್ಮಾಣವಾಗುತ್ತಿರುವ ವಸತಿ ಸಮುಚ್ಚಯ ಕಾಮಗಾರಿಗಳಲ್ಲಿ ಭಾರೀ ಅವ್ಯವಹಾರ ನಡೆದಿರುವ ಬಗ್ಗೆ ಪ್ರಸ್ತಾಪಿಸುವುದು.

## 09. ಚುನಾವಣಾ ಪ್ರಸ್ತಾವ

**ಮಾನ್ಯ ಸಭಾನಾಯಕರು:-**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು) ಅವರು:-**

ಅ) ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

ಆ) ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ, ಕನ್ನಡ ವಿಶ್ವವಿದ್ಯಾಲಯದ (ಹಂಪಿ) ಗೌರ್ನಿಂಗ್ ಕೌನ್ಸಿಲ್‌ಗೆ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಶಾಸನ ಸಭೆಗೆ ಹಾಗೂ ರಾಜ್ಯ ಗ್ರಂಥಾಲಯ ಪ್ರಾಧಿಕಾರ ಸಮಿತಿಗೆ ವಿಧಾನ ಪರಿಷತ್ತಿನ ಒಬ್ಬ ಸದಸ್ಯರನ್ನು ಚುನಾಯಿಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## ೧೦. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

<u>ಶ್ರೀಯುತರುಗಳಾದ:</u>
ಎಸ್.ಆರ್.ಪಾಟೀಲ್ ವಿರೋಧ ಪಕ್ಷದ ನಾಯಕರು
ಬಸವರಾಜ ಶಿವಲಿಂಗಪ್ಪ ಹೊರಟ್ಟಿ
ಬಸವರಾಜ್ ಪಾಟೀಲ್ ಇಟಗಿ
ಪ್ರಕಾಶ್ ಕೆ.ರಾಥೋಡ್
ಬಿ.ಜಿ.ಪಾಟೀಲ್

ಉತ್ತರ ಕರ್ನಾಟಕದ ಮಹತ್ವದ ನೀರಾವರಿ ಯೋಜನೆಯಾದ ಕೃಷ್ಣ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಗೆ ಚಾಲನೆ ನೀಡಿ ಉತ್ತರ ಕರ್ನಾಟಕ ಭಾಗದ ಸುಮಾರು 7 ಜಿಲ್ಲೆಗಳ 14.67 ಲಕ್ಷ ಎಕರೆ ಪ್ರದೇಶಗಳಿಗೆ 130 ಟಿ.ಎಂ.ಸಿ ನೀರನ್ನೊದಗಿಸುವ ಮಹತ್ವಾಕಾಂಕ್ಷಿ ಯೋಜನೆಯನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸುವ ಹಾಗೂ ಮಹಾದಾಯಿ ಯೋಜನೆಗೆ ಹೊರಡಿಸಿರುವ ಗೆಜೆಟ್ ನೋಟಿಫಿಕೇಷನ್ ರೀತ್ಯಾ ಈ ಯೋಜನೆಗೂ ಗೆಜೆಟ್ ನೋಟಿಫಿಕೇಷನ್ ಹೊರಡಿಸುವ ಬಗ್ಗೆ.

## 11. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**